ಕರ್ನಾಟಕ ಸರ್ಕಾರ

# ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ನಡವಳಿಗಳು

ವಿಷಯ:- 2021-22ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:- 1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 163 ಎಂಡಿಎಸ್ 2015, ಬೆಂಗಳೂರು ದಿ: 21.09.2015

2) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021, ಬೆಂಗಳೂರು ದಿ:12.04.2021

3) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021 ,ಬೆಂಗಳೂರು ದಿ:22.10.2021, ದಿ:27.04.21, ದಿ:11.07.21

>>><<<

ಪ್ರಸ್ತಾವನೆ:-

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾಸಿರಿ ಯೋಜನೆಯನ್ನು ಉಲ್ಲೇಖ (1)ರಲ್ಲಿ ಹೊರಡಿಸಿರುವ ಆದೇಶ ಹಾಗೂ ಮಾರ್ಗಸೂಚಿಗಳನ್ವಯ ಜಾರಿಗೊಳಿಸಲಾಗುತ್ತಿದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳನ್ನು 2021-22ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಲು ಉಲ್ಲೇಖ (2)ರಲ್ಲಿ ಆದೇಶ ಹೊರಡಿಸಲಾಗಿದೆ. ಅದರಲ್ಲಿ"ವಿದ್ಯಾಸಿರಿ" ಕಾರ್ಯಕ್ರಮವು ಸಹ ಒಂದಾಗಿರುತ್ತದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳಿಗೆ 2021-22ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಮೂರನೇ ತ್ರೈಮಾಸಿಕ ಕಂತನ್ನು ಉಲ್ಲೇಖ (3)ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ಅದರಂತೆ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ 2021-22ನೇ ಸಾಲಿನ ಮೂರು ತ್ರೈಮಾಸಿಕ ಕಂತಿನಲ್ಲಿ ಬಿಡುಗಡೆಯಾದ ಅನುದಾನದ ಪೈಕಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ "ವಿದ್ಯಾಸಿರಿ"ಯೋಜನೆಯಡಿ ಒಟ್ಟು ರೂ.1650.00ಲಕ್ಷ(ರೂ. ಹದಿನಾರು ಕೋಟಿ ಐವತ್ತು ಲಕ್ಷಗಳು ಮಾತ್ರ) ಗಳನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ.ಸದರಿ ಅನುದಾನದ ಪೈಕಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಗಾಗಿ ಜಿಲ್ಲಾವಾರು ಮಾಹಿತಿಯನ್ನು ದಿನಾಂಕ:22.10.2021 ರವರೆಗೆ ಪಡೆಯಲಾಗಿದೆ, ವಿದ್ಯಾರ್ಥಿನಿಲಯಗಳ ಮಂಜೂರಾತಿ ಸಂಖ್ಯೆಯನ್ನು ಭರ್ತಿ ಮಾಡಿ ಹೆಚ್ಚುವರಿ ಅರ್ಜಿಗಳಿಗೆ"ವಿದ್ಯಾಸಿರಿ"ಯೋಜನೆಯಡಿ ಅನುದಾನ ಬಿಡುಗಡೆ ಮಾಡಲು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದ ಪ್ರಕಾರ ಸಂಬಂಧಪಟ್ಟ ಜಿಲ್ಲೆಗಳಿಗೆ **ರೂ.1249.92ಲಕ್ಷ(ಹನ್ನೆರಡು ಕೋಟಿ ನಲವತ್ತೊಂಬತ್ತು ಲಕ್ಷದ ತೊಂಬತ್ತೆರಡು ಸಾವಿರ ರೂ.ಗಳು ಮಾತ್ರ)**ಗಳನ್ನು ಸಂಬಂಧಪಟ್ಟ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ**ರವರಿಗೆ ಬಿಡುಗಡೆ ಮಾಡಲು ಈ ಕೆಳಕಂಡಂತೆ ಆದೇಶ

ಪು.ತಿ.ನೋ



ರವಾನಿಸಿದೆ.
ದಿನಾಂಕ...2/11/21.........

# <u>ಆದೇಶ</u>

**ಸಂಖ್ಯೆ: ಅಸಂನಿ/ಅಭಿವೃದ್ಧಿ/ವಿದ್ಯಾಸಿರಿ/ಸಿಆರ್-44/2021-22** **ದಿನಾಂಕ: 30.10.2021**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯನ್ನು ಜಾರಿಗೊಳಿಸಲು 2021-22ನೇ ಸಾಲಿನಲ್ಲಿ ಸರ್ಕಾರದಿಂದ ಬಿಡುಗಡೆಯಾದ ಮೂರನೇ ಕಂತಿನ ಅನುದಾನದಲ್ಲಿ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದ ಪ್ರಕಾರ ಸಂಬಂಧಪಟ್ಟ ಜಿಲ್ಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಅಂದರೆ ಮುಸ್ಲಿಂ,ಕ್ರೈಸ್ತ, ಜೈನ್, ಬೌದ್ಧರು, ಸಿಖ್ ಮತ್ತು ಪಾರ್ಸಿ ಜನಾಂಗದ ವಿದ್ಯಾರ್ಥಿಗಳಿಗೆ **ರೂ.1249.92ಲಕ್ಷ(ಹನ್ನೆರಡು ಕೋಟಿ ನಲವತ್ತೊಂಭತ್ತು ಲಕ್ಷದ ತೊಂಭತ್ತೆರಡು ಸಾವಿರ ರೂ.ಗಳು ಮಾತ್ರ)**ಗಳನ್ನು ಲಗತ್ತಿಸಿರುವ ಅನುಬಂಧ ಅನ್ವಯ ಆಯಾ ಜಿಲ್ಲೆಗಳ ಮುಂದೆ ನಮೂದಿಸಿರುವ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಯ **<u>ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ</u>**ರವರಿಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಿದೆ.

<u>ನಿಬಂಧನೆಗಳು:-</u>

1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 163 ಎಂಡಿಎಸ್ 2015, ದಿ: 21.09.2015ರಲ್ಲಿ ನೀಡಲಾಗಿರುವ ಮಾರ್ಗಸೂಚಿಯನ್ವಯ ಸದರಿ ಯೋಜನೆಗೆ ಅನುಷ್ಠಾನಗೊಳಸತಕ್ಕದ್ದು/ವೆಚ್ಚ ಮಾಡುವುದು.
2) ಸರ್ಕಾರಿ ಆದೇಶ ಸಂಖ್ಯೆಎಂಡಬ್ಲುಡಿ 163 ಎಂಡಿಎಸ್ 2015, ದಿ: 21.09.2015ರ ಮಾರ್ಗಸೂಚಿಯಂತೆ ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಠ 5 ಕಿ.ಮೀ ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ, ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ/ಪಟ್ಟಣದಲ್ಲಿರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ. (ಒಂದೇ ನಗರದ ವ್ಯಾಪ್ತಿಯಲ್ಲಿ ಇರುವವರು ಅರ್ಹರಿರುವುದಿಲ್ಲ)
3) ಸ್ವಿಕೃತ ಅರ್ಜಿಗಳನ್ನು ಆಗ್ಗಿಂದಾಗೆ ಹೊರಡಿಸಲಾಗಿರುವ ಆದೇಶ, ಸುತ್ತೋಲೆಗಳಲ್ಲಿ ನೀಡಿರುವ ಸೂಚನೆಗಳು / ಷರತ್ತುಗಳಂತೆ ಕುಲಂಕುಶವಾಗಿ ಪರಿಶೀಲಿಸಿ ಅರ್ಹ ಫಲಾನುಭವಿಗಳಿಗೆ ಅನುದಾನ ಮಾಡತಕ್ಕದ್ದು ಯಾವುದೇ ತಪ್ಪಾಗಿದ್ದಲ್ಲಿ ಮುಂದೆ ಹಾಗೂಹೋಗುಗಳಿಗೆ ನೇರವಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲುಗುವುದು.
4) ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳು ಇರುವ ಸ್ಥಳಗಳಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮೀಸಲಿರುವ ಸ್ಥಾನಗಳನ್ನು ಭರ್ತಿ ಮಾಡುವುದು.
5) **ವಿದ್ಯಾರ್ಥಿನಿಲಯಗಳಿಗೆ ಮಂಜೂರಾದ ಸಂಖ್ಯಾಬಲಕ್ಕೆ ತಕ್ಕಂತೆ ಅಲ್ಪಸಂಖ್ಯಾತರ ವಿದ್ಯಾರ್ಥಿಗಳನ್ನು ಭರ್ತಿ ಮಾಡಿ ನಂತರದ ಹೆಚ್ಚುವರಿ ಅರ್ಜಿಗಳನ್ನು ಮಾತ್ರ ವಿದ್ಯಾಸಿರಿ ಯೋಜನೆಯಡಿ ಪರಿಗಣಿಸುವುದು.**
6) ಸ್ವೀಕೃತವಾದ ಅರ್ಹ ಅರ್ಜಿಗಳಲ್ಲಿ ಹಿಂದಿನ ವರ್ಷದ ವಾರ್ಷಿಕ/ಸೆಮಿಸ್ಟರ್ ತರಗತಿಯಲ್ಲಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಇಳಿಕೆ ಕ್ರಮಾನುಸಾರ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕೋರ್ಸುಗಳ ಅಧಾರದ ಮೇಲೆ ಮಂಜೂರು ಮಾಡತಕ್ಕದ್ದು.
7) ದಿನಾಂಕ:22.102021 ರಂದು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರಿಂದ ಮಾಹಿತಿಯನ್ನು ಪಡೆದು ಅನುದಾನವನ್ನು ಬಿಡುಗಡೆ ಮಾಡಿದೆ.
8) ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ 1,500/- ರಂತೆ 6 ತಿಂಗಳಿಗೆ ರೂ 9000/- ಗಳನ್ನು (ಗರಿಷ್ಠ) ಬಿಡುಗಡೆ ಮಾಡುವುದು.(**ಅಕ್ಟೋಬರ್ 2021 ರಿಂದ ಮಾರ್ಚ 2021 ರವರೆಗೆ**).

ಪು.ತಿ.ನೋ